ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ವೈದ್ಯಕೀಯ ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡದಿರುವ ಬಗ್ಗೆ

ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

982 (1201) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಾಪೂಜಿ ವೈದ್ಯಕೀಯ ಕಾಲೇಜು, ದಾವಣಗೆರೆ, ಹಾಗೂ ಕೆ.ಎಂ.ಸಿ. ವೈದ್ಯಕೀಯ ಕಾಲೇಜು, ಮಂಗಳೂರು ಇಲ್ಲಿ ವ್ಯಾಸಂಗ ಮಾಡುತ್ತಿರುವ(ಹೌಸ್‌ಸರ್ಜನ್/ಪಿ.ಜಿ. ವಿದ್ಯಾರ್ಥಿ) ವಿದ್ಯಾರ್ಥಿಗಳು ಸರ್ಕಾರ ನೀಡುತ್ತಿರುವ ಶಿಷ್ಯವೇತನ (ಸ್ಟೈಫಂಡ್) ನಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; (ವಿವರಗಳನ್ನು ನೀಡುವುದು)

(ಇ) ಮೇಲ್ಕಂಡ ವಿದ್ಯಾರ್ಥಿಗಳಿಗೆ ಶಿಷ್ಯವೇತನ (ಸ್ಟೈಫಂಡ್) ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ?